RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ-IVA<br>Part-IVA | ಬೆಂಗಳೂರು, ಬುಧವಾರ, ಜುಲೈ ೧೨, ೨೦೧೭ (ಆಷಾಢ ೨೧, ಶಕ ವರ್ಷ ೧೯೩೯)<br>Bengaluru, Wednesday, July 12, 2017 (Ashada 21, Shaka Varsha 1939) | ನಂ. ೬೭೬<br>No. 676 |
|---|---|---|

## ಸಂಸದೀಯ ವ್ಯವಹಾರಗಳ ಸಚಿವಾಲಯ

### ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 39 ಶಾಸನ 2017, ಬೆಂಗಳೂರು, ದಿನಾಂಕ: 12.07.2017

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2017ಕ್ಕೆ 2017ರ ಜುಲೈ ತಿಂಗಳ 11ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 36 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

### 2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 36

(2017ರ ಜುಲೈ ತಿಂಗಳ ಹನ್ನೆರಡನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

### ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2017

(2017ರ ಜುಲೈ ತಿಂಗಳ ಹನ್ನೊಂದನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016ನ್ನು (2016ರ ಕರ್ನಾಟಕ ಅಧಿನಿಯಮ 16) ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೆಂಟನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2017 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 15ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016ರ (2016ರ ಕರ್ನಾಟಕ ಅಧಿನಿಯಮ 16) (ಇಲ್ಲಿ ಇನ್ನುಮುಂದೆ ಮೂಲ

ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 15ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ "ಅರವತ್ತೈದು" ಎಂಬ ಪದಕ್ಕೆ "ಅರವತ್ತೇಳು" ಎಂಬ ಪದವನ್ನು ಪ್ರತಿಯೋಜಿಸತಕ್ಕದ್ದು ಮತ್ತು ಹಾಗೆ ಯಾವಾಗಲೂ ಪ್ರತಿಯೋಜಿಸಲಾಗಿದೆ ಎಂದು ಭಾವಿಸತಕ್ಕದ್ದು.

3. 17ನೇ ಪ್ರಕರಣದ ತಿದ್ದುಪಡಿ.- ಮೂಲ ಅಧಿನಿಯಮದ 17ನೇ ಪ್ರಕರಣದಲ್ಲಿ,-

(ಎ) (1)ನೇ ಉಪಪ್ರಕರಣದ ಪರಂತುಕದಲ್ಲಿ "ವಿಶ್ವವಿದ್ಯಾಲಯದಲ್ಲಿ ಇರುವಂಥ" ಎಂಬ ಪದಗಳ ತರುವಾಯ "ಪ್ರಾಧ್ಯಾಪಕರಾಗಿರುವ ಸಂದರ್ಭದಲ್ಲಿ ರಿಜಿಸ್ಟ್ರಾರ್‌ರವರನ್ನು ಅಥವಾ" ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) (2)ನೇ ಉಪಪ್ರಕರಣದಲ್ಲಿ "ವಿಶ್ವವಿದ್ಯಾಲಯದಲ್ಲಿಯ" ಎಂಬ ಪದದ ತರುವಾಯ "ಪ್ರಾಧ್ಯಾಪಕರಾಗಿರುವ ಸಂದರ್ಭದಲ್ಲಿ ರಿಜಿಸ್ಟ್ರಾರ್‌ರವರನ್ನು ಅಥವಾ" ಎಂಬ ಪದಗಳನ್ನು ಸೇರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಕೆ. ದ್ವಾರಕನಾಥ್ ಬಾಬು
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಶಿ7) ಪ್ರತಿಗಳು: ೫೦೦